Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

10.02.2025 14.30 hrs

<><*<><>*><>

<u>ಮುಖ್ಯಾಂಶಗಳು</u>

- **ಬೆಂಗಳೂರಿನಲ್ಲಿ ಏರೋ ಇಂಡಿಯಾ ೨೦೨೫ ಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚಾಲನೆ; ಬಾನಂಗಳದಲ್ಲಿ ಶಕ್ತಿ ಪ್ರದರ್ಶಿಸಿದ ತೇಜಸ್, ಸುಖೋಯ್**
- **ವಿದ್ಯಾರ್ಥಿಗಳು ರೋಬೋಟ್‌ಗಳಲ್ಲ; ಶಿಕ್ಷಕರು, ಪೋಷಕರಿಗೆ ಪರೀಕ್ಷಾ ಪೇ ಚರ್ಚೆಯಲ್ಲಿ ಪ್ರಧಾನಿ ಕಿವಿಮಾತು**
- **ಕಾನೂನು, ಪ್ರವಾಸೋದ್ಯಮ, ವೈದ್ಯಕೀಯ ಶಿಕ್ಷಣ ಇಲಾಖೆ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಬಜೆಟ್ ಪೂರ್ವ ಸಭೆ**
- **ಮೈಸೂರಿನ ಟಿ.ನರಸೀಪುರದಲ್ಲಿ ೧೩ನೇ ಕುಂಭ ಮೇಳಕ್ಕೆ ಚಾಲನೆ; ತ್ರಿವೇಣಿ ಸಂಗಮದಲ್ಲಿ ಭಕ್ತರಿಂದ ಪುಣ್ಯ ಸ್ನಾನ**
- **ನರೇಗಾ ಯೋಜನೆಯಡಿಯಲ್ಲಿ ಸ್ಥಳೀಯರಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಸೂಚನೆ**

<><*<><>*><>

ಬೆಂಗಳೂರಿನಲ್ಲಿ ನಡೆಯುತ್ತಿರುವ ಏರೋ ಇಂಡಿಯಾ -೨೦೨೫ ಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ತೇಜಸ್, ಸುಖೋಯ್ ಸಹಿತ ವಿವಿಧ ಯುದ್ಧ ವಿಮಾನಗಳು ಹಾರಾಡುವ ಮೂಲಕ ಸ್ವಾಗತ ಕೋರಿದವು. ಬಳಿಕ ಮಾತನಾಡಿದ ರಾಜ್‌ನಾಥ್ ಸಿಂಗ್, ಈ ಏರ್ ಶೋ, ಭಾರತದ ಶಕ್ತಿಯ ಮಹಾಕುಂಭ ಎಂದು ಬಣ್ಣಿಸಿದರು. ಏರೋ ಇಂಡಿಯಾ ದೇಶದ ಕೈಗಾರಿಕಾ ಸಾಮರ್ಥ್ಯ ಮತ್ತು ತಾಂತ್ರಿಕ ಪ್ರಗತಿಯನ್ನು ಜಗತ್ತಿಗೆ ಪ್ರದರ್ಶಿಸುವುದರೊಂದಿಗೆ ಸ್ನೇಹಪರ ರಾಷ್ಟ್ರಗಳೊಂದಿಗೆ ಸಂಬಂಧ ವೃದ್ಧಿಗೆ ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

**ಧ್ವನಿ: ರಾಜನಾಥ್ ಸಿಂಗ್ ರಕ್ಷಣಾ ಸಚಿವ, ೨೫ ಸೆಕೆಂಡ್‌ಗಳು**

ಭಾರತದ ರಕ್ಷಣಾ ವಲಯವು, ಜಾಗತಿಕವಾಗಿ ಅಗ್ರ ಐದು ಸ್ಥಾನದಲ್ಲಿದೆ. ಜೊತೆಗೆ ದೇಶದ ಆರ್ಥಿಕ ಬೆಳವಣಿಗೆಯಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ. ರಕ್ಷಣಾ ಉತ್ಪಾದನೆಯಲ್ಲಿ ಆತ್ಮನಿರ್ಭರ ಭಾರತಕ್ಕೆ ಆದ್ಯತೆ ನೀಡುವ ಹಿನ್ನೆಲೆಯಲ್ಲಿ ಈ ಬಾರಿಯ ಬಜೆಟ್‌ನಲ್ಲಿ ಶೇಕಡ ೯.೫೩ ರಷ್ಟು ಅನುದಾನ ಹೆಚ್ಚಿಸಲಾಗಿದೆ. ದೇಶೀಯ ಉತ್ಪಾದನೆ ೧.೨೫

ಲಕ್ಷ ಕೋಟಿ ರೂಪಾಯಿಗಳಿಗೆ ಮತ್ತು ರಫ್ತು ೨೧ ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಬೆಂಗಳೂರಿನಲ್ಲಿ ವೈಮಾನಿಕ ತಂತ್ರಜ್ಞಾನ ಉದ್ಯಮಕ್ಕೆ ಪ್ರೋತ್ಸಾಹ ನೀಡಿ, ಪ್ರತಿಭಾ ಪಲಾಯನ ತಡೆಯಬೇಕು ಎಂದು ಕರೆ ನೀಡಿದರು. ಕರ್ನಾಟಕ ತಾಂತ್ರಿಕ ಹಾಗೂ ಕೈಗಾರಿಕಾ ಪ್ರಗತಿಯಲ್ಲಿ ಮುಂಚೂಣಿಯಲ್ಲಿರುವ ರಾಜ್ಯವಾಗಿದ್ದು, ವಿಶ್ವದರ್ಜೆಯ ಸಂಶೋಧನಾ ಸಂಸ್ಥೆಗಳು ಹಾಗೂ ಅತ್ಯಾಧುನಿಕ ವೈಮಾನಿ ಸಂಸ್ಥೆಗಳನ್ನು ಹೊಂದಿರುವ ಕೌಶಲ್ಯಪೂರ್ಣ ಕಾರ್ಯಪಡೆ ನಮ್ಮಲ್ಲಿದೆ ಎಂದು ಹೇಳಿದರು. ಬೆಂಗಳೂರು ಭಾರತದ ವೈಮಾನಿಕ ಕ್ಷೇತ್ರದ ರಾಜಧಾನಿಯಾಗಿದ್ದು, ದೇಶದ ರಕ್ಷಣಾ ಉತ್ಪಾದನೆ ಮತ್ತು ಸಂಶೋಧನೆಯ ಶೇಕಡ ೬೦ ಕ್ಕಿಂತಲೂ ಹೆಚ್ಚು ಕೊಡುಗೆ ನೀಡುತ್ತಿದೆ ಎಂದು ತಿಳಿಸಿದ್ದಾರೆ.

<><*<><>*><>

ವಿದ್ಯಾರ್ಥಿಗಳು ರೋಬೋಟ್‌ಗಳಲ್ಲ ಅವರು ಪುಸ್ತಕಗಳಲ್ಲಿ ಸಿಲುಕಿಕೊಂಡರೆ ಬೆಳೆಯಲು ಸಾಧ್ಯವಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಅಭಿಪ್ರಾಯಪಟ್ಟಿದ್ದಾರೆ. ಪರೀಕ್ಷಾ ಪೇ ಚರ್ಚಾ ಕಾರ್ಯಕ್ರಮದ ೮ನೇ ಆವೃತ್ತಿಯಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಅವರು, ವಿದ್ಯಾರ್ಥಿಗಳು ತಮ್ಮ ನೆಚ್ಚಿನ ಚಟುವಟಿಕೆಗಳನ್ನು ಮಾಡಬೇಕು, ಆಗ ಮಾತ್ರ ಅವರು ಪರೀಕ್ಷೆಗಳಲ್ಲಿ ಉತ್ತಮ ಪ್ರದರ್ಶನ ನೀಡಲು ಸಾಧ್ಯ ಎಂದು ತಿಳಿಸಿದ್ದಾರೆ. ಪರೀಕ್ಷೆಗಳೇ ಎಲ್ಲವೂ ಎಂಬ ಮನಸ್ಥಿತಿಯೊಂದಿಗೆ ಬದುಕಬಾರದು. ಸಾಧ್ಯವಾದಷ್ಟು ಜ್ಞಾನವನ್ನು ಗಳಿಸಬೇಕು. ಬರೆಯುವ ಅಭ್ಯಾಸವನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ. ಶಿಕ್ಷಕರು ವಿದ್ಯಾರ್ಥಿಗಳ ವಿಶಿಷ್ಟ ಪ್ರತಿಭೆಯನ್ನು ಕಂಡುಹಿಡಿದು ಪೋಷಿಸಬೇಕು ಎಂದು ಪ್ರಧಾನಿ ಕರೆ ನೀಡಿದ್ದಾರೆ. ಇದೇ ವೇಳೆ ಮಕ್ಕಳಿಗೆ ಆರೋಗ್ಯ ಸಲಹೆಯನ್ನು ನೀಡಿದ ಮೋದಿ ಪ್ರತಿಯೊಬ್ಬರೂ ಬೆಳಗಿನ ಸೂರ್ಯನ ಬೆಳಕಿನಲ್ಲಿ ಸಮಯ ಕಳೆಯುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

**ಧ್ವನಿ ಪ್ರಧಾನಿ ನರೇಂದ್ರ ಮೋದಿ**

ನಮ್ಮ ಸಮಾಜ ಹೇಗಿದೆಯೆಂದರೆ, ಕಡಿಮೆ ಅಂಕಗಳು ಬಂದರೆ ಮನೆಯಲ್ಲಿ ಉದ್ವಿಗ್ನ ವಾತಾವರಣ ಸೃಷ್ಟಿಸುತ್ತವೆ ಎಂದು ಹೇಳಿದ್ದಾರೆ. ಒತ್ತಡದ ಬಗ್ಗೆ ಚಿಂತಿಸದೆ ನೀವು ನಿಮ್ಮನ್ನು ಸಿದ್ಧಪಡಿಸಿಕೊಳ್ಳಬೇಕು ವಿದ್ಯಾರ್ಥಿಗಳು ಸದಾ ಸವಾಲುಗಳಿಗೆ ಒಡ್ಡಿಕೊಳ್ಳುತ್ತಲೇ ಇರಬೇಕು ಪ್ರಧಾನಿ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ಧರಾಮಯ್ಯ ಇಂದು ಕೂಡ ಬಜೆಟ್ ಪೂರ್ವ ಸಭೆ ಮುಂದುವರಿಸಿದ್ದಾರೆ. ಇಂದು ಕಾನೂನು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಇಲಾಖೆಯ ಅಧಿಕಾರಗಳೊಂದಿಗೆ ಸಭೆ ನಡೆಸಿದರು. ಬಳಿಕ ಪ್ರವಾಸೋದ್ಯಮ ಇಲಾಖೆಯ

ಕುರಿತಂತೆ ಮಾಹಿತಿ ಪಡೆದುಕೊಂಡರು. ಈ ನಡುವೆ ವೈದ್ಯಕೀಯ ಶಿಕ್ಷಣ ಇಲಾಖೆ ಕುರಿತು ಬಜೆಟ್ ಪೂರ್ವ ಸಭೆ ನಡೆಸಿದ ಅವರು, ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಹಾಗೂ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

<><*<><>*><>

ಮೈಸೂರು ಜಿಲ್ಲೆಯ ಟಿ-ನರಸೀಪುರದಲ್ಲಿರುವ ತ್ರಿವೇಣಿ ಸಂಗಮದಲ್ಲಿ ಇಂದಿನಿಂದ ೩ ದಿನಗಳ ಕಾಲ ನಡೆಯುವ ೧೩ನೇ ಕುಂಭಮೇಳಕ್ಕೆ ಚಾಲನೆ ದೊರೆತಿದೆ. ಕಪಿಲೆ, ಕಾವೇರಿ ಹಾಗೂ ಸ್ಫಟಿಕ ನದಿಗಳ ಸಂಗಮ ಸ್ಥಳವಾದ ನಡುಹೊಳೆ ಬಸಪ್ಪ ನದಿ ಮಧ್ಯದಲ್ಲಿ ಧ್ವಜಾರೋಹಣ ಮಾಡುವ ಮೂಲಕ ಕುಂಭಮೇಳಕ್ಕೆ ವಿವಿಧ ಮಠಗಳ ಮಠಾಧೀಶರು ಚಾಲನೆ ನೀಡಿದರು. ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಸೋಮನಾಥೇಶ್ವರ ಸ್ವಾಮೀಜಿ, ಕಾಗಿನೆಲೆ ಕನಕಗುರು ಮಠದ ನಿರಂಜನಾನಂದ ಪುರಿ ಸ್ವಾಮೀಜಿ, ಕೈಲಾಸನಂದ ಮಠದ ಜಯೇಂದ್ರ ಪುರಿಗಳಿಂದ ಪೂಜಾ ಕೈಂಕರ್ಯ ನೆರವೇರಿತು. ಇಂದು ಬೆಳಗ್ಗೆಯಿಂದಲೇ ಭಕ್ತರ ಪುಣ್ಯ ಸ್ನಾನಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದು, ನದಿಯ ಮೂರು ಕಡೆಗಳಲ್ಲಿ ಪುಣ್ಯ ಸ್ನಾನ ಮಾಡಿದ್ದಾರೆ. ಕುಂಭಮೇಳಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಹಿನ್ನೆಲೆ ಮೈಸೂರು ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯಿಂದ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ನದಿ ಪಾತ್ರದಲ್ಲಿ ನುರಿತ ಈಜು ತಜ್ಞರನ್ನು ನೇಮಕಮಾಡಲಾಗಿದೆ. ದಕ್ಷಿಣ ಪ್ರಯಾಗ ಎಂದೇ ಖ್ಯಾತಿ ಪಡೆದಿರುವ ತಿರುಮಕೂಡಲಿನಲ್ಲಿ ನಡೆಯುತ್ತಿರುವ ೧೩ನೇ ಕುಂಭಮೇಳ ಇದಾಗಿದೆ.

**ಧ್ವನಿ: ಸೋಮನಾಥೇಶ್ವರ ಸ್ವಾಮೀಜಿ ( ೨೧ ಸೆಕೆಂಡ್‌ಗಳು )**

<><*<><>*><>

ಅಕ್ರಮ ಬಾಂಗ್ಲಾ ನುಸುಳುಕೋರರಿಗೆ ಕಡಿವಾಣ ಹಾಕಿ ನರೇಗಾ ಅಡಿಯಲ್ಲಿ ನೀಡುವ ಉದ್ಯೋಗದಲ್ಲಿ ಸ್ಥಳೀಯರಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕಾರ್ಮಿಕ ಸಚಿವರಾದ ಸಂತೋಷ್ ಲಾಡ್ ಸೂಚನೆ ನೀಡಿದ್ದಾರೆ. ಹಾಸನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ಕಾರ್ಮಿಕ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಬಾಲಕಾರ್ಮಿಕ ಪದ್ಧತಿಗೆ ಕಡಿವಾಣ ಹಾಕಬೇಕು. ಬಾಲಕಾರ್ಮಿಕರು ಕಂಡು ಬಂದಲ್ಲಿ ಅವರನ್ನು ದುಡಿಸಿಕೊಳ್ಳುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ. ಹೊರ ರಾಜ್ಯ ಹಾಗೂ ಹೊರ ದೇಶಗಳಿಂದ ಬರುವ ಕಾರ್ಮಿಕರ ವಿರುದ್ಧ ನಿಗಾ ವಹಿಸಬೇಕು. ಸಹಾಯವಾಣಿ ಮೂಲಕ ತಮ್ಮ ಸಮಸ್ಯೆ ಹೇಳಿಕೊಳ್ಳುವ ಕಾರ್ಮಿಕರ ನೆರವಿಗೆ ತಕ್ಷಣ ಧಾವಿಸುವ ಕೆಲಸ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><*<><>*><>

ಯಾದಗಿರಿ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಉತ್ತಮಪಡಿಸಲು ವಿನೂತನ ಕಾರ್ಯಕ್ರಮಗಳ ಮೂಲಕ ಸಂಬಂಧಿಸಿದ ಅಧಿಕಾರಿಗಳು ವಿಶೇಷ ಗಮನ ನೀಡಬೇಕು ಎಂದು

ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಯಾದಗಿರಿ ನಗರದ ಜಿಲ್ಲಾಡಳಿತ ಭವನದಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ಕುರಿತಂತೆ ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರೊಂದಿಗೆ ನಡೆದ ಕಾರ್ಯಾಗಾರದಲ್ಲಿ ಮಾತನಾಡಿ ಅವರು, ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಕಡಿಮೆ ಇದೆ. ಅಧಿಕಾರಿಗಳು ಉತ್ತಮ ಫಲಿತಾಂಶಕ್ಕಾಗಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ತಿಳಿಸಿದ್ದಾರೆ. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಮಾತನಾಡಿ, ಜಿಲ್ಲೆಯ ಫಲಿತಾಂಶ ಉತ್ತಮಪಡಿಸಲು ೧೦ ಅಂಶಗಳ ಕಾರ್ಯಕ್ರಮಗಳನ್ನು ಇಲಾಖೆಯು ಜಾರಿಗೊಳಿಸುತ್ತಿದೆ. ಶಾಲಾ ಅವಧಿಯ ನಂತರ ಮನೆಯಲ್ಲಿಯೇ ಮಕ್ಕಳು ಓದಲು ಉತ್ತಮ ಮೇಲ್ವಿಚಾರಣೆ ಅಗತ್ಯವಿದೆ  ಎಂದು ಹೇಳಿದ್ದಾರೆ.

<><*<><>*><>

ಹಾವೇರಿ ಜಿಲ್ಲೆ ಸವಣೂರು ತಾಲ್ಲೂಕು ಕಳಸೂರು ಗ್ರಾಮದ ಸಮೀಪ ವರದಾ ನದಿಗೆ ಪ್ರತ್ಯೇಕ ಬ್ಯಾರೇಜ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ವಿಧಾನ ಸಭಾ ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ ಹೇಳಿದ್ದಾರೆ.

<><*<><>*><>

ಮಡಿಕೇರಿ ನಗರಸಭೆ ವ್ಯಾಪ್ತಿಯಲ್ಲಿ ೧ ಲೀಟರ್ ಗಿಂತಲೂ ಕಡಿಮೆ ಪ್ರಮಾಣದ ಪ್ಲಾಸ್ಟಿಕ್ ಕುಡಿಯುವ ನೀರಿನ ಬಾಟಲಿಗಳ ಬಳಕೆ ಹಾಗೂ ಮಾರಾಟವನ್ನು ಸಂಪೂರ್ಣ ನಿಷೇಧಿಸಲಾಗಿದೆ. ಸಾರ್ವಜನಿಕರು ಹಾಗೂ ಉದ್ದಿಮೆದಾರರು ಮಡಿಕೇರಿ ನಗರಸಭೆಯವರೊಂದಿಗೆ ಸಹಕರಿಸುವಂತೆ ನಗರಸಭೆ ಪೌರಾಯುಕ್ತರಾದ ರಮೇಶ್ ಮನವಿ ಮಾಡಿದ್ದಾರೆ.

<><*<> **ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು** <>*><>

<><*<>**ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ** <>*><>